**ದಿನಾಂಕ: 05.04.2021 ರಂದು ಬೆಳಿಗ್ಗೆ 10-30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್-178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾಡ್-178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್-19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

### : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 178ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಭಿಯಂತರರು |
| ಸದಸ್ಯರುಗಳು | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| ಸಾರ್ವಜನಿಕರು | ಪ್ರಕಾಶ್, ಮಾರ್ಷಲ್ |

## :ನಡಾವಳಿಯ ವರದಿ:

- ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

- ಅಪಾರ್ಟ್‌ಮೆಂಟ್‌ನ ನಿವಾಸಿಗಳಿಗೆ ಹಾಗೂ ಸ್ಲಂನ ನಿವಾಸಿಗಳಿಗೆ ವಾಕ್ಸಿನ್ ನೀಡುವ ಕುರಿತು ಚರ್ಚಿಸಲಾಯಿತು.

- ಧನ್ವಂತರಿ ಉದ್ಯಾನವನದಲ್ಲಿ Dos and Donts ರ ಬಗ್ಗೆ ನಾಮಫಲಕವನ್ನು ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.

- ಬೀದಿ ದೀಪಗಳು ದುರಸ್ತಿಪಡಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸುವಂತೆ ಚರ್ಚಿಸಲಾಯಿತು ಹಾಗೂ ಬೀದಿ ದೀಪ ನಿರ್ವಹಣೆ ಬಿಬಿಎಂಪಿ (ದಕ್ಷಿಣ) ನಿಂದ ವಾರ್ಡ್ ಕಮಿಟ ಸಭೆಗಳಿಗೆ ಅಭಿಯಂತರರು ಬಾರದೇ ಇರುವ ಸಂಬಂಧ ಸದರಿಯವರಿಗೆ ನೋಟೀಸ್ ಜಾರಿಗೊಳಿಸಲು ಸೂಚಿಸಲಾಯಿತು.

- ಸಮರ್ಪಕವಾಗಿ ಧನ್ವಂತರಿ ಉದ್ಯಾನವನವನ್ನು ನಿರ್ವಹಿಸದೇ ಇರುವ ಸಂಬಂಧ ಹಾಗೂ ತೋಟಗಾರಿಕೆ ಇಲಾಖೆ ರವರು ಸಭೆಗಳಿಗೆ ಹಾಜರಾಗದೇ ಇರುವ ಸಂಬಂಧ ಸದರಿಯವರಿಗೆ ನೋಟೀಸ್ ಜಾರಿಗೊಳಿಸಲು ಸೂಚಿಸಲಾಯಿತು.

***ಪು.ತಿ.ನೋ.***

- 15ನೇ ಅಡ್ಡರಸ್ತೆಯ ಸರ್ವೀಸ್ ರಸ್ತೆಗಳಿಗೆ ಡಾಂಬರೀಕರಣ ಮಾಡುವ ಸಂಬಂಧ ಮೇಜರ್ ರೋಡ್ ಅಭಿಯಂತರರೊಡನೆ ಚರ್ಚಿಸಲಾಯಿತು.

- 15ನೇ ಅಡ್ಡರಸ್ತೆ, 24ನೇ ಮುಖ್ಯರಸ್ತೆ ಬಳಿ ಬಸ್ ತಂಗುದಾಣವನ್ನು ಒದಗಿಸಿಕೊಡಲು ಕೋರಲಾಯಿತು.

- 24ನೇ ಮುಖ್ಯರಸ್ತೆ, 9ನೇ ಅಡ್ಡರಸ್ತೆ ಬಳಿ ಅನಧಿಕೃತ ಒತ್ತುವರಿ ತೆರವುಗೊಳಿಸಲು ಸೂಚಿಸಲಾಯಿತು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಅಭಿಯಂತರರಾದ ಶ್ರೀ ರಾಮು .ಎಸ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

| | |
|---|---|
| ಸದಸ್ಯ ಕಾರ್ಯದರ್ಶಿ | Deepa 16/4/21 |
| ಹಾಗೂ ಸಹಾಯಕ ಅಭಿಯಂತರರು | ಅಧ್ಯಕ್ಷರು |
| ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ | ವಾರ್ಡ್ ಸಮಿತಿ, ವಾರ್ಡ್ ನಂ. 178 |
| | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ |